# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1004

ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 23.02.2024

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಈ ಪಂಚಾಯಿತಿಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪಿ.ಡಿ.ಓ.ಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ: 5951.<br><br>ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ:5208. |
| (ಆ) | ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಈ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಿ.ಡಿ.ಓಗಳ ಸಂಖ್ಯೆ ಎಷ್ಟು; | ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ 103.<br><br>ಗ್ರಾಮ ಪಂಚಾಯತಿಗಳಿಗೆ 103 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 68 ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದು, 36 ಹುದ್ದೆಗಳು ಖಾಲಿ ಇರುತ್ತವೆ. |
| (ಇ) | ಇಲಾಖೆಯಲ್ಲಿ ಮಂಜೂರಾಗಿರುವ ಹಾಗೂ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಹುದ್ದೆಗಳ ಭರ್ತಿ ಮಾಡಿಕೊಳ್ಳಲಾಗುವುದು; | ಹೌದು.<br><br>ಆದಾಗ್ಯೂ, ಖಾಲಿ ಇರುವ ಗ್ರಾಮ ಪಂಚಾಯಿತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಸಮೀಪದಲ್ಲಿರುವ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರ ವಹಿಸಲು ನಿರ್ದೇಶನ ನೀಡಲಾಗಿದೆ.<br><br>ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ 256 ಹುದ್ದೆಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದದ 220 ಹುದ್ದೆಗಳು,ಗ್ರಾಮ ಪಂಚಾಯತಿ ಕಾರ್ಯದರ್ಶೀ ಗ್ರೇಡ್-2 ವೃಂದದ 343 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ 105 ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುತ್ತಿದೆ.<br><br>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಭರ್ತಿ ಮಾಡಲು ಕ್ರಮ ಕೈಗೊಳ್ಳುವಂತೆ ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. |

| | | |
|---|---|---|
| (ಈ) | ಕೊಡಗು ಜಿಲ್ಲೆ ಸೇರಿದಂತೆ ರಾಜ್ಯದ ಅನೇಕ ಗ್ರಾಮ ಪಂಚಾಯಿತಿಗಳಲ್ಲಿ ಪಿ.ಡಿ.ಓ ಗಳಿಗೆ ಎರಡಕ್ಕಿಂತ ಹೆಚ್ಚಿನ ಪಂಚಾಯಿತಿಗಳ ಜವಾಬ್ದಾರಿಯನ್ನು ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? | ಬಂದಿದೆ.<br><br>ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ 256 ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಗ್ರಾಅಪ 116 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.